7

# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 37 (285)
2. ಸದಸ್ಯರ ಹೆಸರು : ಶ್ರೀ ಪ್ರತಾಪಸಿಂಹ ನಾಯಕ್ .ಕೆ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 21.12.2022
4. ಉತ್ತರಿಸುವ ಸಚಿವರು : ಕಂದಾಯ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಕರಾವಳಿ ಭಾಗದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಮೂಲಗೇಣಿ ಒಕ್ಕಲುಗಳಿಗೆ ಮಾಲೀಕತ್ವ ನೀಡುವ ಕಾಯ್ದೆ ಸಂಪೂರ್ಣವಾಗಿ ಜಾರಿಯಾಗಿ ಮೂಲಗೇಣಿ ಒಕ್ಕಲುಗಳಿಗೆ ನ್ಯಾಯ ಒದಗಿಸಲಾಗಿದೆಯೇ; | ಕೃಷಿಯೇತರ ಭೂಮಿಗಳು, ಮುಖ್ಯವಾಗಿ ಮನೆ ನಿವೇಶನಗಳ ಸಂಬಂಧದಲ್ಲಿ ಮೂಲಗೇಣಿ ಗುತ್ತಿಗೆಗಳ ಕೆಲವು ಬಗೆಗಳು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಚಾಲ್ತಿಯಲ್ಲಿವೆ. ಅನೇಕ ಕಾರಣಗಳಿಂದ ಮೂಲಗೇಣಿದಾರರು ಅಥವಾ ಒಳಮೂಲಗೇಣಿದಾರರು ಆ ಹಿಡುವಳಿ ಸ್ವತ್ತನ್ನು ಪೂರ್ಣವಾಗಿ ಅನುಭವಿಸಲು ಸಾಧ್ಯವಾಗಿರಲಿಲ್ಲ. ಆದುದರಿಂದ, ಮೂಲಗೇಣಿ ಅಥವಾ ಒಳಮೂಲಗೇಣಿದಾರರಿಗೆ ಮಾಲೀಕತ್ವನ್ನು ಪ್ರಧಾನ ಮಾಡಲು "ಕರ್ನಾಟಕ ಮೂಲಗೇಣಿ ಅಥವಾ ಒಳಮೂಲಗೇಣಿದಾರರಿಗೆ ಮಾಲೀಕತ್ವನ್ನು ಪ್ರಧಾನ ಮಾಡುವ ಅಧಿನಿಯಮ, 2011" ಅನ್ನು ದಿನಾಂಕ:25.07.2012 ರಂದು ಸರ್ಕಾರವು ರಾಜ್ಯ ಪತ್ರದಲ್ಲಿ ಪ್ರಕಟಿಸಿದ್ದು, ಈ ಅಧಿನಿಯಮದ ಉಪ ಬಂಧಗಳು ದಿನಾಂಕ:20.12.2012 ರಿಂದ ಜಾರಿಗೆ ಬಂದಿರುತ್ತವೆ.<br><br>ಮೂಲಗೇಣಿದಾರರ ಸಂಘ ಮತ್ತು ಮೂಲಿದಾರರ ಸಂಘಗಳು ಸದರಿ ಮಾಲೀಕತ್ವ ಪ್ರಧಾನ ಮಾಡುವ ಅಧಿನಿಯಮಕ್ಕೆ ಸಂಬಂಧಿಸಿದಂತೆ ಸರ್ಕಾರಕ್ಕೆ ಅನೇಕ ಮನವಿಗಳನ್ನು ಸಲ್ಲಿಸಿದ್ದರು. ಸರ್ಕಾರದ ಹಂತದಲ್ಲಿ ಈ ಬಗ್ಗೆ ಪರಿಶೀಲಿಸಿ, ಸದರಿ ಕಾಯ್ದೆಯನ್ನು ಅನುಷ್ಠಾನಗೊಳಿಸಲು ದಿನಾಂಕ:07.11.2016 ರಂದು "ಕರ್ನಾಟಕ ಮೂಲಗೇಣಿ ಅಥವಾ ಒಳಮೂಲಗೇಣಿದಾರರಿಗೆ ಮಾಲೀಕತ್ವನ್ನು ಪ್ರಧಾನ ಮಾಡುವ ನಿಯಮಗಳು, 2016" ಅನ್ನು ಕರ್ನಾಟಕ ರಾಜ್ಯ ಪತ್ರದ ವಿಶೇಷ ರಾಜ್ಯ ಪತ್ರದಲ್ಲಿ ಅಧಿಕೃತವಾಗಿ ಪ್ರಕಟಿಸಿರುತ್ತದೆ. ಈ ಬಗ್ಗೆ ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಮತ್ತು ಉಡುಪಿ ರವರಿಗೆ ಸೂಚನೆಗಳನ್ನು ಸಹ ನೀಡಿ ಸದರಿ ನಿಯಮಗಳನ್ನು ಅನುಷ್ಠಾನಗೊಳಿಸಲು ಕ್ರಮವಹಿಸಬೇಕೆಂದು ತಿಳಿಸಲಾಗಿರುತ್ತದೆ. |
| ಆ) | ಮೂಲಗೇಣಿ ಮಾಲೀಕತ್ವ ನೀಡುವ ವಿಚಾರದಲ್ಲಿ ಇದುವರೆಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | |
| ಇ) | ಯಾವ ಕಾಲಮಿತಿಯೊಳಗೆ ಮೂಲಗೇಣಿ ಒಕ್ಕಲುಗಳಿಗೆ ಜಮೀನಿನ ಪೂರ್ಣ ಮಾಲೀಕತ್ವ ನೀಡಿ ಆ ಮೂಲಕ ಹಲವಾರು ದಶಕಗಳಿಂದ ತ್ರಿಶಂಕು ಸ್ಥಿತಿಯಲ್ಲಿ ಬದುಕುತ್ತಿರುವ ಮೂಲಗೇಣಿದಾರರಿಗೆ ನ್ಯಾಯ ಒದಗಿಸಲಾಗುವುದೇ? | |

..2

Scanned with OKEN Scanner

| | | |
|---|---|---|
| | | ಪ್ರಸ್ತುತ, ಸದರಿ ಕಾಯ್ದೆಯ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸುವ ಸಲುವಾಗಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 11158–66/2013 ಮತ್ತು 62434/2016 ಗಳನ್ನು ಸಲ್ಲಿಸಲಾಗಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಕ್ರಮವಾಗಿ ದಿನಾಂಕ:14.12.2016 ಮತ್ತು ದಿನಾಂಕ:15.12.2016 ರಂದು ಮಧ್ಯಂತರ ಆದೇಶವನ್ನು ನೀಡಿ **'Status-quo'** ಎಂದು ಆದೇಶ ಮಾಡಿರುತ್ತದೆ. ಸದರಿ ಮಧ್ಯಂತರ ಆದೇಶವು ಮುಂದುವರೆದಿದ್ದು, ಪ್ರಸ್ತುತ ಪ್ರಕರಣವು ವಿಚಾರಣಾ ಹಂತದಲ್ಲಿದೆ. |

ಕಂಇ 09 ಎಲ್ಆರ್ಎಸ್ 2022

(ಆರ್.ಅಶೋಕ)
ಕಂದಾಯ ಸಚಿವರು

Scanned with OKEN Scanner